## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 131 |
| ಸದಸ್ಯರ ಹೆಸರು | : | ಶ್ರೀ ಕೆ.ಎ.ತಿಪ್ಪೇಸ್ವಾಮಿ, (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 05-07-2023 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಕೇಂದ್ರ ಸರ್ಕಾರದ ಸೇತು ಬಂಧನ ಯೋಜನೆ ಅಡಿಯಲ್ಲಿ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ಮತ್ತು ಇತರೆ ಜಿಲ್ಲಾ ರಸ್ತೆಗಳಲ್ಲಿ ಹಾದು ಹೋಗುವ ರೈಲ್ವೆ ಹಳಿಗಳ ಅಡ್ಡಲಾಗಿ ರೈಲ್ವೆ ಮೇಲು ಸೇತುವೆ ಮತ್ತು ಕೆಳ ಸೇತುವೆ ನಿರ್ಮಿಸುವ ಯೋಜನೆಯನ್ನು ಅನುಷ್ಠಾನಗೊಳಸಲಾಗುತ್ತಿದೆಯೇ; | ಹೌದು. |
| ಆ) | ಹಾಗಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳು ಯಾವುವು ಮತ್ತು ಈ ಯೋಜನೆಯ ಅನುಷ್ಠಾನಕ್ಕೆ ರಾಜ್ಯ ಸರ್ಕಾರ ಕ್ರಿಯಾಶೀಲ ಯೋಜನೆಯನ್ನು ತಯಾರಿಸಿ ಕೇಂದ್ರ ಸರ್ಕಾರದ ಅನುಮೋದನೆಗೆ ಮಂಡಿಸಿದೆಯೇ; (ಪೂರ್ಣ ವಿವರ ನೀಡುವುದು) | ಸದರಿ ಯೋಜನೆಯನ್ನು ರೈಲ್ವೆ ಲೆವೆಲ್ ಕ್ರಾಸಿಂಗ್‌ನ ಬಳಿ ಸಂಭವಿಸುತ್ತಿರುವ ಅಪಘಾತಗಳನ್ನು ತಡೆಯಲು ಹಾಗೂ ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲು ಯೋಜಿಸಲಾಗಿದೆ. ರಾಜ್ಯ ಸರ್ಕಾರದ ವತಿಯಿಂದ ಒಟ್ಟು ರೂ.997.50 ಕೋಟಿ ಮೊತ್ತದ 26 ಕಾಮಗಾರಿಗಳನ್ನು ಕೈಗೊಳ್ಳಲು ದಿನಾಂಕ:23-01-2023 ರಂದು ಕೇಂದ್ರ ಸರ್ಕಾರದ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿಗಳ ಮಂತ್ರಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.<br><br>ಪ್ರಸ್ತುತ ಒಟ್ಟು 22 ರೈಲ್ವೆ ಮೇಲು ಸೇತುವೆಗಳ ನಿರ್ಮಾಣವನ್ನು ರೂ.784.50 ಕೋಟಿ ಮೊತ್ತದಲ್ಲಿ ಕೇಂದ್ರ ರಸ್ತೆ ಮೂಲಭೂತ ಸೌಕರ್ಯ ನಿಧಿಯ (CRIF) ಸೇತು ಬಂಧನ ಯೋಜನೆಯಡಿ ಕೈಗೊಳ್ಳಲು ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿಗಳ ಮಂತ್ರಾಲಯದ ಪತ್ರದ ದಿನಾಂಕ:25.05.2023 ರಲ್ಲಿ ಅನುಮೋದನೆ ದೊರೆತಿರುತ್ತದೆ. |
| ಇ) | ರಾಜ್ಯ ಸರ್ಕಾರಕ್ಕೆ ಈ ಯೋಜನೆ ಅನುಷ್ಠಾನಕ್ಕೆ ಇದುವರೆಗೂ ಕೇಂದ್ರದಿಂದ ದೊರೆತಿರುವ ಅನುದಾನ ಎಷ್ಟು; ಮತ್ತು ಈ ಅನುದಾನವನ್ನು ಯಾವ ರೀತಿ ಬಳಸಿಕೊಳ್ಳಲಾಗಿದೆ? (ಪೂರ್ಣ | ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿಗಳ ಮಂತ್ರಾಲಯವು CRIF ಅಡಿಯಲ್ಲಿ ರಾಜ್ಯದಲ್ಲಿ ರೈಲ್ವೆ ಮೇಲ್ಸೇತುವೆಗಳನ್ನು ಕೈಗೊಳ್ಳಲು 2022-23ರಲ್ಲಿ ರೂ.47.86 ಕೋಟಿ ಮತ್ತು 2023-24ನೇ ಸಾಲಿನಲ್ಲಿ ರೂ.94.27 ಕೋಟಿ ಸೇರಿ ಒಟ್ಟು ರೂ.142.12 ಕೋಟಿಗಳನ್ನು ರಾಜ್ಯಕ್ಕೆ ಹಂಚಿಕೆ ಮಾಡಲಾಗಿರುತ್ತದೆ. |

| | | |
|---|---|---|
| | ಮಾಹಿತಿ ನೀಡುವುದು) | ಈ ಯೋಜನೆಯಲ್ಲಿ ಕಾಮಗಾರಿಗಳ ಭೂಸ್ವಾಧೀನ, ಯುಟಿಲಿಟಿ ಸ್ಥಳಾಂತರ ಸೇರಿ ಒಟ್ಟು ರೂ.142.16 ಕೋಟಿ ಮೊತ್ತವನ್ನು ರಾಜ್ಯ ಸರ್ಕಾರದ ವತಿಯಿಂದ ಭರಿಸಬೇಕಾಗಿರುತ್ತದೆ. ಹಾಗೂ ಕೇಂದ್ರದ ವತಿಯಿಂದ ಪ್ರಸ್ತುತ ರೂ.142.12 ಕೋಟಿಗಳನ್ನು ಮಾತ್ರ ಹಂಚಿಕೆ ಮಾಡಿರುವುದರಿಂದ ಕಾಮಗಾರಿಗಳನ್ನು ಕೈಗೊಳ್ಳುವ ಸಂಬಂಧ ಆರ್ಥಿಕ ಇಲಾಖೆಯು ನೀಡುವ ಅನುಮೋದನೆಗೆ ಅನುಗುಣವಾಗಿ ಕಾಮಗಾರಿ ಕೈಗೊಂಡು ಅನುಷ್ಠಾನ ಗೊಳಿಸಲಾಗುವುದು. |

ಕಡತ ಸಂಖ್ಯೆ: ಲೋಇ 133 ಸಿಎನ್‌ಹೆಚ್ 2023 (ಇ)

(ಸತೀಶ್ ಲ ಜಾರಕೀಹೊಳಿ)
ಲೋಕೋಪಯೋಗಿ ಸಚಿವರು